Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
**www.klsvdit.edu.in principal@klsvdit.edu.in**

Date: 03-03-2022

**ಪತ್ರಿಕಾ ಪ್ರಕಟಣೆ:**

## ಸುಧಾರಿತ ಸಂಪರ್ಕ ವ್ಯವಸ್ಥೆ ಸಂಶೋಧನೆ: ಪೇಟೆಂಟ್ ದಾಖಲು

ಕರ್ನಾಟಕ ಲಾ ಸೊಸೈಟಿಯ ವಿಶ್ವನಾಥರಾವ್ ದೇಶಪಾಂಡೆ ತಾಂತ್ರಿಕ ಮಹಾವಿದ್ಯಾಲಯ ಹಳಿಯಾಳದ ಕಂಪ್ಯೂಟರ್ ಸೈನ್ಸ್ ವಿಭಾಗದ ಉಪನ್ಯಾಸಕರಾದ ಡಾ. ವೆಂಕಟೇಶ ಶಂಕರ್ ಅವರು ಕೈಗಾರಿಕೆಗಳಲ್ಲಿ ಉಪಯೋಗಿಸಲ್ಪಡುವ ಸುಧಾರಿತ ಐಒಟಿ ಆಧಾರಿತ ಸಂಪರ್ಕ ವ್ಯವಸ್ಥೆ ಅಭಿವೃದ್ಧಿಪಡಿಸುವ ಮೂಲಕ ಪೇಟೆಂಟ್ (ಬೌದ್ಧಿಕ ಆಸ್ತಿ ಹಕ್ಕು) ಪಡೆದುಕೊಂಡಿದ್ದಾರೆ.

ಕೇಂದ್ರ ಕೈಗಾರಿಕೆ ಮತ್ತು ಆಂತರಿಕ ವ್ಯವಹಾರ ಸಚಿವಾಲಯ ಬಿಡುಗಡೆಗೊಳಿಸಿದ ಫೆಬ್ರುವರಿ 2022 ರ ಪೇಟೆಂಟ್ ಜರ್ನಲ್‌ನಲ್ಲಿ ಈ ಸಂಶೋಧನೆ ದಾಖಲಾಗಿದೆ. ಕೈಗಾರಿಕೆಗಳಲ್ಲಿ ಬಳಸುವ ಇಂಟರ್ನೆಟ್ ಆಧಾರಿತ ಸಂಪರ್ಕ ವ್ಯವಸ್ಥೆಗೆ ಈ ಸಂಶೋಧನೆಯಲ್ಲಿ ಸುಧಾರಿತ ಬದಲಾವಣೆಗಳನ್ನು ಸೂಚಿಸಲಾಗಿದೆ. ಈ ವ್ಯವಸ್ಥೆಯ ಬಳಕೆಯಿಂದ ವಿದ್ಯುತ್ ಶಕ್ತಿ ಬಳಕೆ ಪ್ರಮಾಣ ಮತ್ತು ಸೈಬರ್ ದಾಳಿಯ ಸಾಧ್ಯತೆ ಕಡಿಮೆಯಾಗಲಿದ್ದು ಇಂಟರ್ನೆಟ್ ಮುಖಾಂತರ ಮಾಹಿತಿಗಳನ್ನು ಸುರಕ್ಷಿತವಾಗಿ ಕಳಿಸಲು ಸಹಕಾರಿಯಾಗಿದೆ.

ಪೇಟೆಂಟ್ ದಾಖಲಿಸಿದ ಈ ಸಂಶೋಧನೆಯ ಕುರಿತು ಮಹಾವಿದ್ಯಾಲಯದ ಆಡಳಿತ ಮಂಡಳಿ ಅಧ್ಯಕ್ಷರಾದ ಶ್ರೀ. ವಿನಾಯಕ ಲೋಕುರ್, ಪ್ರಾಂಶುಪಾಲರಾದ ಡಾ. ವಿ ಎ ಕುಲಕರ್ಣಿ, ಡಾ. ಮಹೇಂದ್ರ ದೀಕ್ಷಿತ್, ಪ್ರೊ. ಪೂರ್ಣಿಮಾ ರಾಯ್ಕರ್ ಮತ್ತು ಎಲ್ಲ ಸಿಬ್ಬಂದಿ ವರ್ಗದವರು ಶ್ಲಾಘನೆ ವ್ಯಕ್ತಪಡಿಸಿದ್ದಾರೆ.

ಪ್ರಾಂಶುಪಾಲರು

Principal
KLS Vishwanathrao Deshpande
Institute of Technology, Haliyal



ಡಾ. ವೆಂಕಟೇಶ ಶಂಕರ್